# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 104 |
| ಸದಸ್ಯರ ಹೆಸರು | : | ಶ್ರೀ ಎಂ.ಪಿ.ಸುನೀಲ್ ಸುಬ್ರಮಣಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2018 |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಿಗೆ ನೀಡಲಾಗಿರುವ ಮೂಲ ಸೌಕರ್ಯಗಳ ವಿವರ ನೀಡುವುದು. | ➢ ಕೊಡಗು ಜಿಲ್ಲೆಯಲ್ಲಿ ಈ ಕೆಳಕಂಡಂತೆ ಒಟ್ಟು 06 ಸರ್ಕಾರಿ ಪದವಿ ಕಾಲೇಜುಗಳಿವೆ.<br>➢ 1) ಕುಶಾಲನಗರ, 2) ವಿರಾಜಪೇಟೆ, 3) ನಾಪೋಕ್ಲು, 4) ಸೋಮವಾರ ಪೇಟೆ, 5) ಮಡಿಕೇರಿ ಸರ್ಕಾರಿ ಪದವಿ ಕಾಲೇಜು 6) ಮಡಿಕೇರಿ ಸರ್ಕಾರಿ ಮಹಿಳಾ ಪದವಿ ಕಾಲೇಜು.<br>➢ **ಕುಶಾಲನಗರ** ಪದವಿ ಕಾಲೇಜಿಗೆ ಕಟ್ಟಡವನ್ನು 2012-13 ರಿಂದ ಇಲ್ಲಿಯವರೆಗೆ ರೂ.319.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ.<br>**ವಿರಾಜಪೇಟೆ** ಪದವಿ ಕಾಲೇಜಿಗೆ ಕಟ್ಟಡವನ್ನು 2012-13 ರಿಂದ ಇಲ್ಲಿಯವರೆಗೆ ರೂ.166.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ.<br>**ನಾಪೋಕ್ಲು** ಪದವಿ ಕಾಲೇಜಿಗೆ ಕಟ್ಟಡವನ್ನು 2012-13 ರಿಂದ ಇಲ್ಲಿವರೆಗೆ ರೂ.55.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ.<br>**ಸೋಮವಾರಪೇಟೆ** ಪದವಿ ಕಾಲೇಜಿಗೆ ಕಟ್ಟಡವನ್ನು 2012-13 ರಿಂದ ಇಲ್ಲಿಯವರೆಗೆ ರೂ.202.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ.<br>**ಮಡಿಕೇರಿ** ಪದವಿ ಕಾಲೇಜು ಹಾಗೂ **ಮಡಿಕೇರಿ ಮಹಿಳಾ** ಪದವಿ ಕಾಲೇಜಿಗೆ ತಲಾ ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡವನ್ನು ನಿರ್ಮಿಸಲು ಅನುಮೋದನೆಯಾಗಿದ್ದು, ಪದವಿ ಕಾಲೇಜಿಗೆ ನಿವೇಶನ ದೊರಕಿಲ್ಲದ ಕಾರಣ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. ಮಹಿಳಾ ಪದವಿ ಕಾಲೇಜಿಗೆ ಕರ್ಣಂಗೇರಿ ಗ್ರಾಮದಲ್ಲಿ ಎರಡು ಎಕರೆ ಜಾಗವಿದ್ದು, ಕಾಮಗಾರಿ ಪ್ರಾರಂಭಿಸಲಾಗುವುದು. |
| ಜಿಲ್ಲೆಯಲ್ಲಿನ ಹಲವು ಕಾಲೇಜುಗಳಲ್ಲಿ ಮೂಲ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ<br>1) <u>ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುಶಾಲನಗರ</u><br>ಈ ಕಾಲೇಜಿಗೆ ಈಗಾಗಲೇ ವಿವಿಧ ಕಟ್ಟಡ ಕಾಮಗಾರಿಗಳಿಗಾಗಿ ರೂ.319.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ. ಇದಲ್ಲದೇ 2018-19ನೇ ಸಾಲಿನ ಆಯವ್ಯಯದಲ್ಲಿ ಸದರಿ ಕಾಲೇಜಿನ ಹೆಚ್ಚುವರಿ ತರಗತಿ ಕೊಠಡಿಗಳು, ಪ್ರಯೋಗಾಲಯ ಕಟ್ಟಡ, ಗ್ರಂಥಾಲಯ ಕಟ್ಟಡ ಶೌಚಾಲಯ ನಿರ್ಮಾಣ, ವಿದ್ಯಾರ್ಥಿನಿಯರಿಗೆ ವಿಶ್ರಾಂತಿ ಗೃಹ ಹಾಗೂ ಅಡಿಟೋರಿಯಂ ನಿರ್ಮಾಣಕ್ಕಾಗಿ ಕ್ರಿಯಾ ಯೋಜನೆಯಲ್ಲಿ ಅವಕಾಶ ಕಲ್ಪಿಸಿಕೊಳ್ಳಲಾಗಿದೆ.<br>2) <u>ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿರಾಜಪೇಟೆ</u><br>ಈ ಕಾಲೇಜಿಗೆ ಈಗಾಗಲೇ ವಿವಿಧ ಕಟ್ಟಡ ಕಾಮಗಾರಿಗಳಿಗಾಗಿ ರೂ.166.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ. ಇದಲ್ಲದೇ 2018-19ನೇ ಸಾಲಿನ ಆಯವ್ಯಯದಲ್ಲಿ ಸದರಿ ಕಾಲೇಜಿನ ಹೆಚ್ಚುವರಿ ತರಗತಿ ಕೊಠಡಿಗಳ ನಿರ್ಮಾಣಕ್ಕಾಗಿ ಅನುದಾನವನ್ನು ಹಂಚಿಕೆ ಮಾಡಿಕೊಳ್ಳಲಾಗಿದೆ. |

| | |
|---|---|
| | 3) **<u>ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನಾಪೋಕ್ಲು</u>**<br>ಈ ಕಾಲೇಜಿಗೆ ಈಗಾಗಲೇ ವಿವಿಧ ಕಟ್ಟಡ ಕಾಮಗಾರಿಗಳಿಗಾಗಿ ರೂ.55.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ.<br>4) **<u>ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೋಮವಾರಪೇಟೆ</u>**<br>ಈ ಕಾಲೇಜಿಗೆ ಈಗಾಗಲೇ ವಿವಿಧ ಕಟ್ಟಡ ಕಾಮಗಾರಿಗಳಿಗಾಗಿ ರೂ.202.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ.<br>5) **<u>ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಡಿಕೇರಿ</u>**<br>ಈ ಕಾಲೇಜಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ರೂ.200.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದ್ದು, ಸ್ವಂತ ನಿವೇಶನ ಇಲ್ಲದೇ ಇರುವ ಕಾರಣ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲಾಗಿರುವುದಿಲ್ಲ. ನಿವೇಶನ ದೊರೆತ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು<br>6) **<u>ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಮಡಿಕೇರಿ</u>**<br>ಈ ಕಾಲೇಜಿಗೆ ಸ್ವಂತಕಟ್ಟಡ ನಿರ್ಮಾಣ ಮಾಡಲು ರೂ.200.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿದ್ದು, ಕರ್ಣಂಗೇರಿ ಗ್ರಾಮದಲ್ಲಿ 2 ಎಕರೆ ಜಾಗವಿದ್ದು, ಸದರಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುತ್ತಿದೆ. |
| ಮಡಿಕೇರಿಯ ಸರ್ಕಾರಿ ಪದವಿ ಕಾಲೇಜಿನ ಕಟ್ಟಡಗಳ ದುರಸ್ಥಿ ಕಾರ್ಯ ಹಾಗೂ ಶೌಚಾಲಯದ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ? (ವಿವರ ನೀಡುವುದು) | ಮಡಿಕೇರಿಯ ಸರ್ಕಾರಿ ಪದವಿ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು ಸ್ವಂತ ನಿವೇಶನ ಇಲ್ಲದೇ ಇರುವುದರಿಂದ ಕಟ್ಟಡಗಳ ದುರಸ್ಥಿ ಕಾರ್ಯ ಹಾಗೂ ಶೌಚಾಲಯದ ಕಾಮಗಾರಿ ಪ್ರಶ್ನೆ ಉದ್ಭವಿಸುವುದಿಲ್ಲ. ಸ್ವಂತ ನಿವೇಶನ ದೊರೆತ ತಕ್ಷಣ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲಾಗುವುದು. |

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 168 ಹೆಚ್‌ಪಿಯು 2018